ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಜ್ಯದ ಪ್ರಮುಖ ನಗರಗಳ ರಸ್ತೆಗಳು ಹದಗೆಟ್ಟಿರುವ ಕುರಿತು

ಶ್ರೀ ಹೆಚ್. ಎಂ. ರಮೇಶ್‌ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

1088 (1188) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಂಗಳೂರು ಹೊರತುಪಡಿಸಿ ರಾಜ್ಯದ ಬಹುತೇಕ ಪ್ರಮುಖ ನಗರಗಳ ರಸ್ತೆಗಳು ತೀರಾ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರಸ್ತೆಗಳ ಅಭಿವೃದ್ಧಿಗೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ;

(ಆ) ಜಿಲ್ಲಾ ಕೇಂದ್ರಗಳ ಮತ್ತು ಪ್ರಮುಖ ತಾಲ್ಲೂಕು ಕೇಂದ್ರಗಳಲ್ಲಿ ರಸ್ತೆ ಅಭಿವೃದ್ಧಿಯಾಗದೇ ವರ್ಷಗಳೇ ಕಳೆದಿರುವುದು ಸರ್ಕಾರ ಗಮನಿಸಿದೆಯೇ;

(ಇ) ರಸ್ತೆ ಗುಂಡಿಗಳು ವಾಹನ ಸವಾರರಿಗೆ ತೀವ್ರ ಸಂಕಷ್ಟ ತಂದೊಡ್ಡುತ್ತಿದ್ದು, ಅನೇಕ ಅಪಘಾತಗಳಿಗೆ ಕಾರಣವಾಗಿದ್ದು ಇದಕ್ಕೆ ಶಾಶ್ವತ ಪರಿಹಾರಗಳೇನು;

(ಈ) ಕಳೆದೆರಡು ವರ್ಷಗಳಿಂದ ರಾಜ್ಯದ ವಿವಿಧ ಮೇಲ್ಸೇತುವೆ, ಸೇತುವೆ ಮತ್ತು ಅಂಡರ್ ಪಾಸ್‌ಗಳಿಗೆ ವ್ಯಯಿಸಲಾದ ಹಣವೆಷ್ಟು? (ಸಂಪೂರ್ಣ ವಿವರ ನೀಡುವುದು)